ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ಬೀದರ್ ಜಿಲ್ಲೆಯಲ್ಲಿ ಕುಡಿಯುವ ನೀರಿನ ಬಗ್ಗೆ

ಶ್ರೀ ವಿಜಯಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

710 (762) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ಜಿಲ್ಲೆಯ ಗ್ರಾಮಗಳಿಗೆ ಕುಡಿಯುವ ನೀರನ್ನು ಯಾವ ಯಾವ ಮೂಲಗಳಿಂದ ಒದಗಿಸಲಾಗುತ್ತಿದೆ ;

(ಆ) ಬಹುಗ್ರಾಮ ಕುಡಿಯುವ ನೀರಿನ ಯೋಜನೆ ಅಡಿಯಲ್ಲಿ ಬೀದರ್ ಜಿಲ್ಲೆಯ ಎಷ್ಟು ಗ್ರಾಮಗಳಿಗೆ ಕುಡಿಯುವ ನೀರನ್ನು ಒದಗಿಸಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಇ) 2018-19, 2019-20ನೇ ಸಾಲಿನಲ್ಲಿ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯಡಿ ಬಿಡುಗಡೆಯಾದ ಅನುದಾನ ಎಷ್ಟು ; ಅನುದಾನವು ಸಮರ್ಪಕವಾಗಿ ಬಳಕೆಯಾಗುತ್ತಿದೆಯೇ;

(ಈ) ಬೀದರ್ ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆಯಿಂದ ಸುಮಾರು ಗ್ರಾಮಗಳು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಕುಡಿಯುವ ನೀರನ್ನು ಒದಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?